ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಮೂಲ ಸೌಕರ್ಯ ಅಭಿವೃದ್ಧಿ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

109 (133) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಪಟ್ಟಣ ಭಾಗಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮಗಳು ಜಾರಿಯಲ್ಲಿವೆಯೇ ;

(ಆ) ಹಾಗಿದ್ದಲ್ಲಿ, ಪಟ್ಟಣ ಭಾಗಗಳಲ್ಲಿ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯ ಪೂರೈಸಲು ಸರ್ಕಾರದ ಕಾಲಮಿತಿ ಏನು ;

(ಇ) ಸದರಿ ಕಾರ್ಯಕ್ರಮವನ್ನು ಪೂರ್ಣಗೊಳಿಸಿ ಮೂಲಭೂತ ಸೌಕರ್ಯಗಳು ದೊರಕಿಸಿಕೊಡುವ ಸಂಬಂಧ ಅಕ್ರಮ ಮತ್ತು ದುಂದು ವೆಚ್ಚಕ್ಕೆ ಕಡಿವಾಣ ಹಾಕುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)